# ರಾಜ್ಯದ ಮೊದಲ ಫೆನೆಸ್ಟಾ ಶೋರೂಂ ಉದ್ಘಾಟನೆ

**ಮಂಗಳೂರು:** ಭಾರತದ ಅತಿದೊಡ್ಡ ಕಿಟಕಿ ಮತ್ತು ಬಾಗಿಲುಗಳ ಬ್ರ್ಯಾಂಡ್ ಆಗಿರುವ ಫೆನೆಸ್ಟಾದ ಹೊಸ ಎಕ್ಸ್‌ಕ್ಲೂಸಿವ್ ಶೋರೂಂ ನಗರದ ನಂತೂರು ಬಿಕರ್ನಕಟ್ಟೆಯ ಹೂವಿನ ಮಾರುಕಟ್ಟೆ ಬಳಿ ಆರಂಭವಾಗಿದೆ. ಇದು ಅತ್ಯುನ್ನತ ದರ್ಜೆಯ ಯುಪಿವಿಸಿ ಕಿಟಕಿ ಹಾಗೂ ಬಾಗಿಲುಗಳ ಸಂಗ್ರಹವನ್ನು ಹೊಂದಿದೆ.

ಮಂಗಳೂರು ಶೋರೂಂ ಉದ್ಘಾಟನೆ ಮಾಡಿ ಮಾತನಾಡಿದ ಫೆನೆಸ್ಟಾ ಬ್ಯುಸಿನೆಸ್ ಹೆಡ್ ಸಾಕೇತ್ ಜೈನ್, ಸ್ಪಷ್ಟ ಗ್ರಾಹಕ ಕೇಂದ್ರಿತ ದೃಷ್ಟಿಕೋನ ಮತ್ತು ಹೆಚ್ಚು ಗ್ರಾಹಕರನ್ನು ತಲುಪುವುದು ಫೆನೆಸ್ಟಾದ ಕಾರ್ಯತಂತ್ರದ ಎರಡು ಆಯಾಮಗಳು. ಈ ಅಂಶಗಳು ಹೊಸ ಶೋರೂಂ ಉದ್ಘಾಟನೆಯೊಂದಿಗೆ ಸ್ಪಷ್ಟವಾಗಿದ್ದು, 700ಕ್ಕೂ ಹೆಚ್ಚು ವೈವಿಧ್ಯಮಯ ಶ್ರೇಣಿಯ ಆಕರ್ಷಕ ಉತ್ಪನ್ನಗಳನ್ನು ಹೊಂದಿದೆ ಎಂದು ವಿವರಿಸಿದರು. ಫೆನೆಸ್ಟಾ ಉತ್ಪನ್ನಗಳನ್ನು ಗ್ರಾಹಕರ ಅಗತ್ಯತೆ ಮತ್ತು ಪರಿಸರಾತ್ಮಕ ಅಂಶಗಳಾದ ಶಬ್ದ, ಮಳೆ, ದೂಳು ಮತ್ತು ಮಾಲಿನ್ಯವನ್ನು ಗಮನದಲ್ಲಿಟ್ಟುಕೊಂಡು ತಯಾರಿಸಲಾಗಿದೆ ಎಂದು ವಿವರಿಸಿದರು.

ಶೋರೂಂನಲ್ಲಿ ಉತ್ಪನ್ನಗಳ ಪ್ರದರ್ಶನದೊಂದಿಗೆ ಗ್ರಾಹಕರು ವೈವಿಧ್ಯಮಯ ಶ್ರೇಣಿಯನ್ನು ಅನುಭವಿಸಲು, ಬ್ರ್ಯಾಂಡ್ ಅರ್ಥ ಮಾಡಿಕೊಳ್ಳಲು ಮತ್ತು ಮಾಹಿತಿಯುಕ್ತ ನಿರ್ಧಾರಗಳನ್ನು ಕೈಗೊಳ್ಳಲು ಅವಕಾಶವಿದೆ ಎಂದರು. ಇದು ಕರ್ನಾಟಕದ ಮೊಟ್ಟಮೊದಲ ಮಳಿಗೆಯಾಗಿದ್ದು, 2020ರ ಡಿಸೆಂಬರ್ ಒಳಗಾಗಿ ದೇಶದ ಎಲ್ಲ ರಾಜ್ಯಗಳಿಗೆ ಇದನ್ನು ವಿಸ್ತರಿಸಲಾಗುವುದು ಎಂದು ಹೇಳಿದರು.